ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ:ಕಾಶಿಇ:181:ಶೈವಿ:ವಿಜಂ:2015-16

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:02.01.2020.

# ಸಭಾ ಸೂಚನಾ ಪತ್ರ

## *(VIDEO CONFERENCE)*

ವಿಷಯ: ದಿ:12-01-2020 ರಂದು ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸುವ ಹಾಗೂ ಜಿಲ್ಲಾ ಮಟ್ಟದಲ್ಲಿ ವಿವೇಕ ಜ್ಞಾನ ಕೇಂದ್ರವನ್ನು ಉದ್ಘಾಟಿಸುವ ಬಗ್ಗೆ.

ಉಲ್ಲೇಖ: ದಿನಾಂಕ:30-12-2019ರಂದು ಮಾನ್ಯ ಉಪ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಸೂಚನೆಗಳಂತೆ.

******

ದಿನಾಂಕ:12-01-2020ರಂದು ಸ್ವಾಮಿ ವಿವೇಕಾನಂದರ 156ನೇ ಜನ್ಮ ದಿನಾಚರಣೆ ರಂದು ಜಿಲ್ಲಾ ಮಟ್ಟದಲ್ಲಿ ವಿವೇಕ ಜ್ಞಾನ ಕೇಂದ್ರವನ್ನು ಉದ್ಘಾಟಿಸಲು ಹಾಗೂ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲು ಮಾನ್ಯ ಉಪ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸೂಚಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ದಿನಾಂಕ:12-01-2020 ರಂದು ಸ್ವಾಮಿ ವಿವೇಕಾನಂದರ 156ನೇ ಜನ್ಮ ದಿನಾಚರಣೆಯನ್ನು ಆಚರಿಸುವ ಹಾಗೂ ವಿವೇಕ ಜ್ಞಾನ ಕೇಂದ್ರವನ್ನು ಉದ್ಘಾಟಿಸುವ ಬಗ್ಗೆ ಬೆಂಗಳೂರಿನ ಶ್ರೀ.ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಮತ್ತು ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟ್ಯಾಪ್ ವಿತರಣಾ ಯೋಜನೆಯ ಸಮಾರಂಭವನ್ನು ಆಯೋಜಿಸಿದ್ದು, ಸದರಿ ಸಮಾರಂಭ ನಿರ್ವಹಣೆ ಕುರಿತು ಅಗತ್ಯ ಮಾರ್ಗಸೂಚಿಗಳನ್ನು/ನಿರ್ದೇಶನಗಳನ್ನು ನೀಡುವ ಸಲುವಾಗಿ ವಿಡಿಯೋ ಕಾನ್ಫರೆನ್ಸ್ ಅನ್ನು ದಿನಾಂಕ:04.01.2020ರಂದು ನಿಗದಿಪಡಿಸಲಾಗಿದೆ.

ಪ್ರಯುಕ್ತ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ದಿ:04-01-2020 ರಂದು ಅಪರಾಹ್ನ 1.00 ಗಂಟೆಗೆ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸುವಂತೆ ಸೂಚಿಸಲಾಗಿದೆ.

ಆಯುಕ್ತರು
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ,**

1) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
2) ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
3) ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಪ್ರಾಂಶುಪಾಲರುಗಳಿಗೆ
4) ಶ್ರೀ.ಭಾಗ್ಯವಾನ್ ಮುದಿಗೌಡ್ರ, ಐ.ಟಿ ಸಮನ್ವಯಾಧಿಕಾರಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ, ಬಹುಮಹಡಿ ಕಟ್ಟಡ, ಬೆಂಗಳೂರು.
2) ಮಾನ್ಯ ಉಪ ಮುಖ್ಯ ಮಂತ್ರಿಗಳ ಹಾಗೂ ಉನ್ನತ ಶಿಕ್ಷಣ ಸಚಿವರ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
3) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆಗೆ
4) ಕಛೇರಿ ಪ್ರತಿ.